ಡಾ|| ಎನ್. ನಾಗಾಂಬಿಕಾ ದೇವಿ, ಭಾ.ಆ.ಸೇ.
ಸರ್ಕಾರದ ಪ್ರಧಾನ ಕಾರ್ಯದರ್ಶಿ
Dr. N. Nagambika Devi, I.A.S.
Principal Secretary to Govt.

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಅ.ಸ. ಪತ್ರ.ಗ್ರಾಅಪ:37:ರಸ್ತೆ:2014 ದಿನಾಂಕ:20.06.2016.

ಮಾನ್ಯ ಶ್ರೀ **ಅನಿರುದ್ಧ್ ಶ್ರವಣ್ ರವರೆ,**

**ವಿಷಯ:** ಕಲಬುರ್ಗಿ ಜಿಲ್ಲಾ ಪಂಚಾಯತ್ ಕಟ್ಟಡ ನವೀಕರಣ ಕಾಮಗಾರಿ ಕುರಿತು ವರದಿ ನೀಡುವ ಬಗ್ಗೆ.

**ಉಲ್ಲೇಖ:** 1. ಸಭೆಯ ನಡಾವಳಿ ದಿನಾಂಕ:11.02.2016.
2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ:37:ರಸ್ತೆ:2014.ದಿನಾಂಕ:11.02.2016.
3. ಇದೇ ಸಮ ಸಂಖ್ಯೆಯ ಪತ್ರ ದಿ:06.04.2016 & 20.05.2016.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಲಬುರ್ಗಿ ಜಿಲ್ಲಾ ಪಂಚಾಯತ್ ಕಟ್ಟಡ ನವೀಕರಣ ಕಾಮಗಾರಿಗೆ ಸಂಬಂಧಿಸಿದಂತೆ ಬಂದಂತಹ ದೂರುಗಳು ಹಾಗೂ ವಿಧಾನ ಪರಿಷತ್‌ನಲ್ಲಿ ಪ್ರಶ್ನೆಗಳ ಮತ್ತು ಗಮನ ಸೆಳೆಯುವ ಸೂಚನೆಗಳನ್ನಾಧರಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವುದಾಗಿ ಭರವಸೆ ನೀಡಲಾಗಿರುತ್ತದೆ.

ಅದರಂತೆ, ಕಲಬುರ್ಗಿ ಜಿಲ್ಲಾ ಪಂಚಾಯತ್ ಕಟ್ಟಡ ನವೀಕರಣ ಕಾಮಗಾರಿಗೆ ಸಂಬಂಧಿಸಿದಂತೆ ಸರ್ಕಾರವು ತನಿಖೆಗೆ ನಿಯೋಜಿಸಿದ ಶ್ರೀ ಎಸ್. ನಟರಾಜ್, ಎಸ್.ಕ್ಯೂ.ಎಂ ರವರು ಸ್ಥಳ ತನಿಖೆ ಮಾಡಿ ಸರ್ಕಾರಕ್ಕೆ ತನಿಖಾ ವರದಿಯನ್ನು ಸಲ್ಲಿಸಿರುತ್ತಾರೆ. ತನಿಖಾ ವರದಿಯ ಅಭಿಪ್ರಾಯದಂತೆ ಕಟ್ಟಡ ಕಾಮಗಾರಿ ಸಮರ್ಪಕವಾಗಿ ನಡೆದಿದ್ದು, ವಿದ್ಯುತ್ ಕಾಮಗಾರಿ ಅಪೂರ್ಣಗೊಂಡಿರುತ್ತದೆ ಎಂದು ಹಾಗೂ

- ಆಡಳಿತಾತ್ಮಕ ಅನುಮೋದನೆಯನ್ನು ಭಾಗಶಃ ಪಡೆದು ಮುಂದುವರೆದ ಕಾಮಗಾರಿಗಳಿಗೆ ಅನುಮೋದನೆಯನ್ನು ಪಡೆದುಕೊಳ್ಳದೇ ಇರುವುದು ಇದಕ್ಕೆ ಕಾರಣರಾದವರ ಮೇಲೆ ಸೂಕ್ತ ಕ್ರಮ ಜರುಗಿಸಲು ಮತ್ತು
- ವಿದ್ಯುತ್ ಕಾಮಗಾರಿಗಳನ್ನು ಸಂಪೂರ್ಣವಾಗಿ ಅನುಷ್ಠಾನಕ್ಕೆ ತರದೇ ಇರುವುದರ ಬಗ್ಗೆ ವರದಿ ನೀಡಿರುತ್ತಾರೆ.

ಇದನ್ನಾಧರಿಸಿ ಭಾಗಶಃ ಆಡಳಿತಾತ್ಮಕ ಅನುಮೋದನೆಯನ್ನು ಪಡೆದು ಮತ್ತು ಮುಂದುವರೆದ ಕಾಮಗಾರಿಗಳಿಗೆ ಅನುಮೋದನೆ ಪಡೆಯದೇ ಇರುವುದಕ್ಕೆ ಕಾರಣ ಮತ್ತು ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳ ವಿವರಗಳನ್ನು ಸಲ್ಲಿಸಲು, ಆಡಳಿತಾತ್ಮಕ ಅನುಮೋದನೆ ಪಡೆಯಲು ವಿವರಗಳನ್ನು ಸರ್ಕಾರಕ್ಕೆ ಸಲ್ಲಿಸಲು ಮತ್ತು ವಿದ್ಯುತ್ ಕಾಮಗಾರಿಗಳನ್ನು ಪೂರ್ಣಗೊಳಿಸಲು ಹಲವಾರು ಪತ್ರಗಳನ್ನು ಬರೆಯಲಾಗಿರುತ್ತದೆ. ಆದಾಗ್ಯೂ ನಿಮ್ಮಿಂದ ಯಾವುದೇ ಉತ್ತರ ಬಂದಿರುವುದಿಲ್ಲ.

ಈ ಹಿನ್ನಲೆಯಲ್ಲಿ ಈ ಪ್ರಕರಣದ ಕುರಿತಂತೆ ತೆಗೆದುಕೊಳ್ಳಬೇಕಾದ ಕ್ರಮಗಳನ್ನು ತಿಳಿಸಲು ದಿನಾಂಕ:11.02.2016 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ ಅ & ಪಂ.ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಸಭೆಯೊಂದನ್ನು ನಡೆಸಿ, ಸದರಿ ಸಭೆಯಲ್ಲಿ ಕಲಬುರ್ಗಿ ಜಿಲ್ಲಾ ಪಂಚಾಯತ್ ವತಿಯಿಂದ ಸಹಾಯಕ ಕಾರ್ಯದರ್ಶಿಗಳು ಹಾಜರಾಗಿದ್ದು, ಕಾಮಗಾರಿಗೆ ಸಂಬಂಧಿಸಿದ ವಿವರಣೆಗಳನ್ನು ನೀಡಿರುತ್ತಾರೆ.

ಬಹುಮಹಡಿ ಕಟ್ಟಡ, 3ನೇ ಮಹಡಿ, 3ನೇ ಗೇಟ್, ಬೆಂಗಳೂರು-560 001. M.S. Building, 3rd Floor, Gate No. 3, Bangalore-560 001.
Tel. : 080-2235 3929 / 2203 2446 Fax : 080-2235 3927 e-mail : prsrdpr@karnataka.gov.in

ಕಾಮಗಾರಿಯ ಆಡಳಿತಾತ್ಮಕ ಅನುಮೋದನೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರದಿಂದ ಅನುಮೋದನೆ ಪಡೆದಿರುವ ಅನುದಾನದ ಜೊತೆಗೆ ಜಿ.ಪಂ ಅನುಮೋದನೆಯಂತೆ ಹೆಚ್ಚುವರಿಯಾಗಿ ಭರಿಸಿರುವ ವೆಚ್ಚದ ಕುರಿತು ಯಾವ ಯೋಜನೆ/ ಲೆಕ್ಕಶೀರ್ಷಿಕೆಯಡಿ ಅನುದಾನ ಹಂಚಿಕೆಯಾಗಿದೆ ಹಾಗೂ ಕೆಆರ್‌ಐಡಿಎಲ್ ಸಂಸ್ಥೆಗೆ ಬಿಡುಗಡೆ ಮಾಡಿರುವ ವಿವರಗಳ ಸೂಕ್ತ ಉಲ್ಲೇಖ/ ದಾಖಲೆಗಳೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಹಾಗೂ ಅಪೂರ್ಣಗೊಂಡಿರುವ ವಿದ್ಯುತ್ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಿ ಸರ್ಕಾರಕ್ಕೆ ವರದಿ ನೀಡುವಂತೆ ಅಪರ ಮುಖ್ಯ ಕಾರ್ಯದರ್ಶಿಯವರು ಸದರಿ ಸಭೆಯಲ್ಲಿ ಸೂಚಿಸಿರುತ್ತಾರೆ (ಸಭಾ ನಡವಳಿ ಲಗತ್ತಿಸಿದೆ).

ಈ ನಡುವೆ ಸಭಾ ನಡವಳಿಯಂತೆ ಕೆಆರ್‌ಐಡಿಎಲ್ ಸಂಸ್ಥೆಯು ವಿದ್ಯುತ್ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅಂದಾಜು ಪತ್ರಿಕೆಗಳನ್ನು ತಯಾರಿಸಿ ಅನುಮೋದನೆಗೆ ಜಿ.ಪಂಗೆ ಸಲ್ಲಿಸಿರುವುದಾಗಿಯೂ, ಆದರೆ, ಇವರೆವಿಗೂ ಅನುಮೋದನೆ ದೊರೆತ್ತಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಈ ಪ್ರಸ್ತಾವನೆಯ ಕುರಿತು ನಿಯಮಾನುಸಾರ ಪರಿಶೀಲಿಸಿ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಹಾಗೂ ಒಂದೊಮ್ಮೆ ಆಡಳಿತಾತ್ಮಕ ಅನುಮೋದನೆ ಸರ್ಕಾರದ ವ್ಯಾಪ್ತಿಗೆ ಬರುವುದಾದಲ್ಲಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಕೋರಲಾಗಿತ್ತು. ಆದರೆ ಇದುವರೆಗೂ ಸದರಿ ವಿಷಯದ ಬಗ್ಗೆ ತೆಗೆದುಕೊಂಡ ಕ್ರಮದ ಕುರಿತು ಯಾವುದೇ ಮಾಹಿತಿಯನ್ನು ತಾವು ನೀಡಿರುವುದಿಲ್ಲ.

ಅಲ್ಲದೆ, ಈ ಪ್ರಕರಣದ ಕುರಿತು ಲೋಕಾಯುಕ್ತದಲ್ಲಿಯೂ ಸಹ ದೂರುಗಳು ದಾಖಲಾಗಿ ವಿವರಗಳನ್ನು ಸರ್ಕಾರದಿಂದ ಬಯಸಿರುತ್ತದೆ. ಈ ಹಿನ್ನೆಲೆಯಲ್ಲಿ ಕೂಡಲೇ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ದಿನಾಂಕ:11.02.2016ರಂದು ಅಪರ ಮುಖ್ಯ ಕಾರ್ಯದರ್ಶಿಗಳು ನಡೆಸಿದ ಸಭಾ ನಡವಳಿಯಂತೆ ಕ್ರಮಗಳನ್ನು ಕೈಗೊಂಡು ವರದಿಯನ್ನು ಶೀಘ್ರವಾಗಿ ಸರ್ಕಾರಕ್ಕೆ ನೀಡಲು ಮತ್ತೊಮ್ಮೆ ಕೋರಲಾಗಿದೆ.

ಶುಭಾಶಯಗಳೊಂದಿಗೆ,

ತಮ್ಮ ವಿಶ್ವಾಸಿ

**ಇವರಿಗೆ,**
**ಶ್ರೀ ಅನಿರುದ್ಧ್ ಶ್ರವಣ್** ಭಾ.ಆ.ಸೇ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಕಲಬುರ್ಗಿ ಜಿಲ್ಲಾ ಪಂಚಾಯತ್,
**ಕಲಬುರ್ಗಿ.**